ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ

(ಆರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 11ನೇ ಫೆಬ್ರವರಿ, 2015

(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2015ರ ಫೆಬ್ರವರಿ 02ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಮಾನ್ಯ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ 02ನೇ ಫೆಬ್ರವರಿ 2015ರಂದು ಶ್ರೀ ಬಸವರಾಜ ರಾಯರೆಡ್ಡಿಯವರು ಸೂಚಿಸಿದ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ.

2. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಬಸವರಾಜ ರಾಯರೆಡ್ಡಿ ಅವರು "ರಾಜ್ಯದಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಮಾಡಿಕೊಂಡಿರುವ ಒಡಂಬಡಿಕೆ" ಬಗ್ಗೆ ದಿನಾಂಕ:03.02.2015ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಒಂದನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 14(08)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

3.ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಏಳನೇ ಪಟ್ಟಿ
ಆ) ದಿನಾಂಕ 04.02.2015ರ ಎರಡನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ರವಿಸುಬ್ರಮಣ್ಯ ಎಲ್.ಎ. ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 30(283)	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು
ಇ) ದಿನಾಂಕ 05.02.2015ರ ಮೂರನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ರಾಜೀವ ಪಿ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 33(654)	:	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲ ಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಏಳನೇ ಪಟ್ಟಿ

ಪು.ತಿ.ನೊ

4 ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಎಲ್.ಎ. ರವಿಸುಬ್ರಮಣ್ಯ, ಎಸ್. ರಘು, ಎಸ್.ಆರ್. ವಿಶ್ವನಾಥ್, ಬಿ.ಎನ್. ವಿಜಯಕುಮಾರ್, ಎಂ. ಸತೀಶ್ ರೆಡ್ಡಿ ಮತ್ತು ಎಂ. ಕೃಷ್ಣಪ್ಪ ಅವರುಗಳು ಬೆಂಗಳೂರು ಮಹಾನಗರ ಪಾಲಿಕೆಯನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯನ್ನಾಗಿ ಪರಿವರ್ತಿಸಿದ ನಂತರವೂ, ಬಿ.ಬಿ.ಎಂ.ಪಿ.ಯಲ್ಲಿರುವ ಹಲವು ವಿಭಾಗಗಳಲ್ಲಿ ಒಂದಕ್ಕೊಂದು ಸಮನ್ವಯತೆ ಇಲ್ಲದಿರುವುದರಿಂದ ಬೆಂಗಳೂರು ನಗರದ ಅಭಿವೃದ್ಧಿಗೆ ತೊಂದರೆಯಾಗುತ್ತಿರುವ ಬಗ್ಗೆ ಚರ್ಚೆ.

2. ಶ್ರೀಯುತರುಗಳಾದ ಜಗದೀಶ ಶೆಟ್ಟರ್, ಆರ್.ಅಶೋಕ್,ಬಸವರಾಜ ಬೊಮ್ಮಾಯಿ, ಗೋವಿಂದ ಎಂ. ಕಾರಜೋಳ, ಕೆ.ಜಿ.ಬೋಪಯ್ಯ ಹಾಗೂ ಇತರರು ರಾಜ್ಯದ ಹಲವಾರು ಜಿಲ್ಲೆಗಳಲ್ಲಿ ಸರ್ಕಾರಿ ಜಮೀನುಗಳನ್ನು ಒತ್ತುವರಿ ಮಾಡಿಕೊಂಡು ವ್ಯವಸಾಯ ಮಾಡುತ್ತಿರುವ ಸಣ್ಣ ರೈತರುಗಳನ್ನು ತೆರವುಗೊಳಿಸುತ್ತಿರುವುದರಿಂದ ಉಂಟಾಗಿರುವ ಆತಂಕದ ಪರಿಸ್ಥಿತಿಯ ಬಗ್ಗೆ ನಡೆದ ಚರ್ಚೆಗೆ ಸರ್ಕಾರದ ಉತ್ತರ.

5. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಕೆ.ಬಿ. ಪ್ರಸನ್ನಕುಮಾರ್ ಅವರು ರಾಜ್ಯದ ಅರಣ್ಯ ಪ್ರದೇಶದಲ್ಲಿ 1978ಕ್ಕಿಂತ ಪೂರ್ವದಲ್ಲಿ ಸಾಗುವಳಿದಾರರಿಗೆ ಕೇಂದ್ರ ಸರ್ಕಾರದ ಅರಣ್ಯ ಸಂರಕ್ಷಣೆ ಕಾಯ್ದೆ 1980ರ ಪ್ರಕಾರ ಬಿಡುಗಡೆಗೊಳಿಸಿದ್ದು ಈವರೆವಿಗೂ ಸಾಗುವಳಿದಾರರಿಗೆ ಹಕ್ಕು ಪತ್ರ ನೀಡಲು ಕ್ರಮ ಕೈಗೊಳ್ಳದಿರುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

2. ಶ್ರೀ ಮಧು ಎಸ್. ಬಂಗಾರಪ್ಪ ಅವರು ರಾಜ್ಯಾದ್ಯಂತ ರೈತರ ಪಂಪ್‌ಸೆಟ್‌ಗಳಿಗೆ ಅಕ್ರಮವಾಗಿ ಅಳವಡಿಸಿಕೊಂಡಿರುವ ವಿದ್ಯುತ್ ಸಂಪರ್ಕವನ್ನು ಸಕ್ರಮಗೊಳಿಸಲು ಅರ್ಜಿ ಸಲ್ಲಿಸಲು ನಿಗದಿ ಮಾಡಿರುವ ಅವಧಿಯನ್ನು ವಿಸ್ತರಿಸುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

3. ಶ್ರೀ ಬಿ.ಆರ್. ಪಾಟೀಲ ಅವರು ರಾಜೀವ್ ಗಾಂಧಿ ಗ್ರಾಮೀಣ ವಸತಿ ಅಭಿವೃದ್ಧಿ ನಿಗಮದಿಂದ ಆಳಂದ ಪಟ್ಟಣದಲ್ಲಿ ವಸತಿಹೀನರಿಗೆ ನಿವೇಶನ ನೀಡಲು ಜಮೀನು ಖರೀದಿ ಮಾಡಿದ್ದರೂ ನಿವೇಶನ ಹಂಚಿಕೆ ಮಾಡದಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು.

4. ಶ್ರೀ ಜೆ.ಟಿ. ಪಾಟೀಲ ಅವರು ಶಾಸಕರ ಪತ್ರಗಳಿಗೆ ಅಧಿಕಾರಿಗಳು ತ್ವರಿತವಾಗಿ ಸ್ಪಂದಿಸದಿರುವುದರಿಂದ ಆಗುತ್ತಿರುವ ಅನಾನುಕೂಲ ಸರ್ಕಾರದ ತೊಂದರೆಯ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

ಪು.ತಿ.ನೋ

5. ಶ್ರೀ ಪಿಳ್ಳ ಮುನಿಶಾಮಪ್ಪ ಅವರು ದೇವನಹಳ್ಳಿ ತಾಲ್ಲೂಕಿನಲ್ಲಿರುವ ಕೆಂಪೇಗೌಡ ಅಂತರ ರಾಷ್ಟ್ರೀಯ ವಿಮಾನ ನಿಲ್ದಾಣವು ಅಣ್ಣೇಶ್ವರ ಗ್ರಾಮ ಪಂಚಾಯ್ತಿಗೆ ಸಂದಾಯ ಮಾಡಬೇಕಾಗಿರುವ ಬಾಕಿ ತೆರಿಗೆ ಹಣವನ್ನು ಸಂದಾಯ ಮಾಡದಿರುವುದರಿಂದ ಪಂಚಾಯ್ತಿಯ ಅಭಿವೃದ್ಧಿ ಕಾರ್ಯಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರ ಗಮನ ಸೆಳೆಯವುದು.

6. ಶ್ರೀ ಎನ್. ಚಲುವರಾಯಸ್ವಾಮಿ ಅವರು ಬೆಂಗಳೂರು-ಮಂಗಳೂರು ರಾಷ್ಟ್ರೀಯ ಹೆದ್ದಾರಿ-48ರಲ್ಲಿ ನಾಗಮಂಗಲ ತಾಲ್ಲೂಕಿನ ಕದಬಹಳ್ಳಿ ಬಳಿ ಅಂಡರ್‌ಪಾಸ್, ಸರ್ವೀಸ್ ರಸ್ತೆ ನಿರ್ಮಿಸುವುದು ಹಾಗೂ ಬೆಳ್ಳೂರು ಕ್ರಾಸ್ ಮತ್ತು ಹಿರಿಸಾವೆ ಬಳಿ ಸರ್ವೀಸ್ ರಸ್ತೆಯನ್ನು ಸರಿಯಾದ ರೀತಿಯಲ್ಲಿ ರಚನೆ ಮಾಡಿಲ್ಲದಿರುವ ಬಗ್ಗೆ ಹಾಗೂ ಬೆಳ್ಳೂರು ಕ್ರಾಸ್ ಬಳಿಯಿರುವ ಟೋಲ್ ಪ್ಲಾಜಾವನ್ನು ಬೆಳ್ಳೂರು ಕ್ರಾಸ್ ನಂತರ ನಿರ್ಮಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

7. ಶ್ರೀ ಗುರು ಪಾಟೀಲ ಶಿರವಾಳ ಅವರು ಶಾಸಕರ ಕ್ಷೇತ್ರಾಭಿವೃದ್ಧಿ ನಿಧಿಯಲ್ಲಿ ಶಾಸಕರು ಸೂಚಿಸುವ ಎರಡು ಲಕ್ಷ ಮೀರಿದ ಕಾಮಗಾರಿಗಳಿಗೆ ಅನುಮೋದನೆ ನೀಡಲು ಕಾರ್ಯನಿರ್ವಾಹಕ ಅಭಿಯಂತರರಿಗೆ ಅಧಿಕಾರ ನೀಡುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

8. ಶ್ರೀ ಬಿ.ವೈ.ರಾಘವೇಂದ್ರ ಅವರು ಪಡಿತರ ಚೀಟಿಗಳನ್ನು ಪಡೆಯುವಾಗ ಆಧಾರ್ ಸಂಖ್ಯೆಯನ್ನು ನೀಡುವುದರ ಕುರಿತು ಗೊಂದಲವಿರುವ ಬಗ್ಗೆ ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರ ಗಮನ ಸೆಳೆಯುವುದು.

9. ಶ್ರೀ ಹೆಚ್.ಡಿ. ರೇವಣ್ಣ ಅವರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಮಾಗಡಿ ರಸ್ತೆಯಿಂದ ತುಮಕೂರು ರಸ್ತೆವರೆಗೂ ರಸ್ತೆ ಅಭಿವೃದ್ಧಿ ಕಾಮಗಾರಿಗಾಗಿ ಟೆಂಡರ್ ಪಡೆದ ಗುತ್ತಿಗೆದಾರರು ಕಳಪೆ ಕಾಮಗಾರಿ ನಿರ್ವಹಿಸಿರುವ ಬಗ್ಗೆ ಪ್ರಾಧಿಕಾರದ ಟಾಸ್ಕ್ ಫೋರ್ಸ್ ಸಮಿತಿಯು ವರದಿ ಸಲ್ಲಿಸಿದ್ದರೂ ಅದೇ ಗುತ್ತಿಗೆದಾರರಿಗೆ 2835.12 ಲಕ್ಷ ರೂ.ಗಳ ರಸ್ತೆ ಕಾಮಗಾರಿಯನ್ನು ನೀಡಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

10. ಶ್ರೀ ಈ. ತುಕಾರಾಂ ಅವರು ಮೆ; ಅಲ್ಸೇರ್ ಲಕ್ಷ್ಮೀ ವಿತ್ತಲ್ ಕಂಪನಿ ಇವರು ಕುಡಿತಿನಿ ಹಾಗೂ ಹರಗಿನದೋಣಿ ಗ್ರಾಮಗಳ ಜಮೀನುಗಳನ್ನು ಹಾಗೂ ಮೆ; ಬ್ರಾಹ್ಮಿಣಿ ಸ್ಟೀಲ್ಸ್ ಕರ್ನಾಟಕ ಲಿಮಿಟೆಡ್ (ಹಾಲಿ ಉತ್ತಮ ಗಾಲ್ವಾ ಫೆರೋಸ್ ಲಿಮಿಟೆಡ್) ಅವರು ವೇಣಿವೀರಾಪುರ, ಕುಡಿತಿನಿ, ಕೊಳಗಲ್ಲು ಮತ್ತು ಎರ್ರಂ ಗ್ರಾಮಗಳ ಜಮೀನುಗಳನ್ನು ಕೈಗಾರಿಕಾ ಉದ್ದೇಶಕ್ಕಾಗಿ ಸ್ವಾಧೀನಪಡಿಸಿಕೊಂಡಿದ್ದು, ಆ ಜಮೀನುಗಳ ದರವನ್ನು ನಿಗದಿಪಡಿಸುವಲ್ಲಿ ಉಂಟಾಗಿರುವ ತಾರತಮ್ಯದಿಂದಾಗಿ ರೈತರಿಗೆ ಅನ್ಯಾಯವಾಗಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು

ಪು.ತಿ.ನೋ

11. ಶ್ರೀ ಹೆಚ್.ಎಸ್.ಪ್ರಕಾಶ್ ಅವರು ಹಾಸನ ನಗರ ಸಭೆಯಲ್ಲಿ ಪೌರಾಯುಕ್ತರಾಗಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಯು ಲಕ್ಷಾಂತರ ರೂಪಾಯಿಗಳನ್ನು ದುರುಪಯೋಗ ಮಾಡಿರುವ ಆರೋಪ ಸಾಬೀತಾಗಿದ್ದರೂ ಅವರ ವಿರುದ್ಧ ಇದುವರೆವಿಗೂ ಸರ್ಕಾರ ಕ್ರಮಕೈಗೊಳ್ಳದಿರುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

12. ಶ್ರೀ ಕೆ.ಶಿವಮೂರ್ತಿ ಅವರು ರಾಜ್ಯದ ರಾಷ್ಟ್ರೀಯ ಹೆದ್ದಾರಿಗಳಲ್ಲಿ, ಸಾರ್ವಜನಿಕ ಸ್ಥಳಗಳಲ್ಲಿ ಮತ್ತು ಟೋಲ್‌ಗಳಲ್ಲಿ ಶೌಚಾಲಯ ನಿರ್ಮಿಸುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

6. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ಹ್ಯಾರಿಸ್ ಎನ್.ಎ. ಅವರು "ಶೈಕ್ಷಣಿಕ ಗುಣಮೌಲ್ಯಗಳ ವರ್ಧನೆ" ಬಗ್ಗೆ ದಿನಾಂಕ:04.02.2015ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಎರಡನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 26(537)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಪಿ. ಓಂಪ್ರಕಾಶ
ಕಾರ್ಯದರ್ಶಿ

Raj N